# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಅಭಿಯಂತರರ ಕಛೇರಿ, ವಾರ್ಡ್ ಸಂಖ್ಯೆ 46 ಜೆ.ಸಿ ನಗರ.ಬೆಂಗಳೂರು.

ಸಂಖ್ಯೆ: ಸ.ಅ/ವಾ-46/ಪಿ.ಆರ್/25 /2022-23 ದಿನಾಂಕ:16-07-2022

## ವಾರ್ಡ್ ಸಮಿತಿ ಸಭೆಯ ನಡವಳಿಗಳು

**ವಿಷಯ:** ಮಾನ್ಯ ಆಯುಕ್ತರು ಬಿ.ಬಿ.ಎಂ.ಪಿ ರವರ ಆದೇಶ ಸಂಖ್ಯೆ:ಬಿ12(5)ಪಿ.ಆರ್/35/2020-21 ದಿನಾಂಕ: 21-09-2020. ರವರ ಆದೇಶದಂತೆ ದಿನಾಂಕ:-16-07-2022 ರಂದು ವಾರ್ಡ್ 46 ಜೆ.ಸಿ ನಗರ ಮಾಲ್ಗುಡಿ ಪಾರ್ಕ್‌ನಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು.

### ::ಸಭೆಗೆ ಹಾಜರಾಗಿದ್ದವರ ವಿವರಗಳು::

| ಕ್ರ.ಸಂ | ಹೆಸರು ಶ್ರೀಮತಿ/ಶ್ರೀ | ಪದನಾಮ | ಹಾಜರಾತಿ |
|---|---|---|---|
| 1. | ಶ್ರೀ. ಭೀಮಾನಾಯ್ಕ್ | ವಾರ್ಡ್ ಸಮಿತಿ ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿಗಳು | ಹಾಜರಿ |
| 2. | ಶ್ರೀ. ಸೋಮಶೇಖರ್ ನಿಟ್ಟೂರೆ | ವಾರ್ಡ್ ಸಹಾಯಕ ಕಾರ್ಯದರ್ಶಿಗಳು ಹಾಗೂ ಸಹಾಯಕ ಅಭಿಯಂತರರು, ವಾರ್ಡ್-46 | ಹಾಜರಿ |
| 3. | ಶ್ರೀ.ಗಣೇಶ್.ಕೆ.ಎನ್ | ಕಿರಿಯ ಆರೋಗ್ಯ ಪರಿವೀಕ್ಷಕರು, | ಹಾಜರಿ |
| 4. | ಶ್ರೀ. ಶಿವಕುಮಾರ್ | ಕಿರಿಯ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ | ಹಾಜರಿ |
| 5. | ಶ್ರೀಮತಿ ಅನಿಸ್ ಫಾತೀಮಾ | ಹಿರಿಯ ಆರೋಗ್ಯ ಪರಿವೀಕ್ಷಕರು | ಹಾಜರಿ |
| 6. | ಶ್ರೀ. ರವೀಂದ್ರ | ಅರಣ್ಯ ಇಲಾಖೆ | ಹಾಜರಿ |
| 7. | ಶ್ರೀ. ಮೂರ್ತಿ | ಕಂದಾಯ ವಸೂಲಿಗಾರರ | ಹಾಜರಿ |
| 8. | ಶ್ರೀ. ಸ್ವಾಮಿ | ಬೀದಿ ದೀಪ ನಿರ್ವಹಣೆ | ಹಾಜರಿ |
| 9. | ಶ್ರೀ. ಎನ್. ಶಿವಪ್ಪ | ಘನತ್ಯಾಜ್ಯ ಮೇಲ್ವಿಚಾರಕರು | ಹಾಜರಿ |
| 10. | ಶ್ರೀ. ಮರಿಯಪ್ಪ | ಸಾರ್ವಜನಿಕರು | ಹಾಜರಿ |
| 11. | ಶ್ರೀ. ಎಂ.ಯುವರಾಜ್ | ಸಾರ್ವಜನಿಕರು | ಹಾಜರಿ |

ವಾರ್ಡ್ ಕಾರ್ಯದರ್ಶಿಗಳಾದ ಶೀ.ಸೋಮಶೇಖರ್ ನಿಟ್ಟೂರೆ, ಸಹಾಯಕ ಅಭಿಯಂತರರು ರವರು ಸಭೆಗೆ ಹಾಜರಾದ ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಗಳಾದ ಶ್ರೀ ಭೀಮಾನಾಯ್ಕ್ ರವರಿಗೆ ಸ್ವಾಗತ ಕೋರಿ ಸಭೆಯನ್ನು ಪ್ರಾರಂಭಿಸಲಾಯಿತು. ಹಾಗೂ ಅಧ್ಯಕ್ಷರಿಗೆ ವಾರ್ಡ್ ಸಭೆ ಸಾರ್ವಜನಿಕರ ಕುಂದು ಕೊರತೆಗಳ ಬಗ್ಗೆ ವಿಸ್ತಾರವಾಗಿ ಮಾತನಾಡಲು ಕೋರಲಾಯಿತು.

1. 9ನೇ ಅಡ್ಡರಸ್ತೆಯಲ್ಲಿ ಮರದ ರೆಂಬೆ ಕೊಂಬೆಗಳನ್ನು ಕತ್ತರಿಸಲು ಅರಣ್ಯ ಇಲಾಖಾ ಅಧಿಕಾರಿಗಳಿಗೆ ಸೂಚಿಸಲಾಯಿತು.
2. 17ನೇ ಅಡ್ಡರಸ್ತೆ, ಮನೆ ನಂ.299 ರ ಬಳಿ ಖಾಲಿ ನಿವೇಶನದಲ್ಲಿ ಕಸ ಹಾಕುತ್ತಿರುವವ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಲು ಕಿರಿಯ ಆರೋಗ್ಯ ಪರಿವೀಕ್ಷಕರಿಗೆ ಸೂಚಿಸಲಾಯಿತು.
3. ಆರ್.ಟಿ ನಗರ, 2ನೇ ಬ್ಲಾಕ್, 5ನೇ ಅಡ್ಡರಸ್ತೆಯಲ್ಲಿ ತೆರೆದ ಕೊಳವೆ ಬಾವಿ ತೆರವುಗೊಳಿಸಲು ವಾರ್ಡ್‌ನ ಸಹಾಯಕ ಅಭಿಯಂತರರಿಗೆ ತಿಳಿಸಲಾಯಿತು.
4. ಆರ್.ಟಿ ನಗರ ಸುತ್ತಮುತ್ತ ಅತಿಯಾದ ಸಂಚಾರ ದಟ್ಟಣೆಯಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿದ್ದು, ಸರಿಪಡಿಸುವಂತೆ ಆರ್.ಟಿ ನಗರ ಸಂಚಾರಿ ಪೊಲೀಸ್‌ರಿಗೆ ತಿಳಿಸಲಾಯಿತು.
5. ನಾರಾಯಣಪ್ಪ ಬ್ಲಾಕ್ ಎಬಿಸಿ ಅಡ್ಡರಸ್ತೆಗಳಲ್ಲಿ ಕಸ ಗುಡಿಸುವ ಸಮಸ್ಯೆಯನ್ನು ಸರಿಪಡಿಸುವಂತೆ ಕಿರಿಯ ಆರೋಗ್ಯ ಪರಿವೀಕ್ಷಕರಿಗೆ ತಿಳಿಸಲಾಯಿತು.

6. ವಾರ್ಡ್‌ನ ರಾಜಕಾಲುವೆಯಲ್ಲಿ ತುಂಬಿಕೊಂಡಿರುವ ಹೂಳನ್ನು ತೆಗೆಸಲು ಬೃಹತ್ ಮಳೆನೀರು ಕಾಲುವೆ ಅಧಿಕಾರಿಗಳಿಗೆ ಸೂಚಿಸಲಾಯಿತು.
7. 15ನೇ ಅಡ್ಡರಸ್ತೆಯಲ್ಲಿ ಬ್ಲಾಕ್‌ಸ್ಪಾಟ್ ಅನ್ನು ತೆರವುಗೊಳಿಸಲು ಆರೋಗ್ಯ ಪರಿವೀಕ್ಷಕರಿಗೆ ಸೂಚಿಸಲಾಯಿತು.
8. ಬೀದಿ ನಾಯಿಗಳನ್ನು ನಿಯಂತ್ರಣದ ಬಗ್ಗೆ ಕ್ರಮ ಕೈಗೊಳ್ಳಲು ಪಶುಪಾಲನಾ ಇಲಾಖಾಧಿಕಾರಿಗಳಿಗೆ ಸೂಚಿಸಲಾಯಿತು.
9. 6ನೇ ಅಡ್ಡರಸ್ತೆ, ದಿನ್ನೂರಿನಿಂದ ಆರ್.ಟಿ ನಗರಕ್ಕೆ ಸಂಪರ್ಕ ಕಲ್ಪಿಸುವ ರಸ್ತೆಯಲ್ಲಿರುವ ರಸ್ತೆ ಗುಂಡಿಗಳನ್ನು ಮುಚ್ಚಿಸಲು ಸಹಾಯಕ ಅಭಿಯಂತರರಿಗೆ ಸೂಚಿಸಲಾಯಿತು.

ಈ ಮೇಲಿನ ಎಲ್ಲಾ ಅಂಶಗಳಿಗೆ ಸಂಬಂಧಪಟ್ಟಂತೆ ಅಧಿಕಾರಿಗಳೊಂದಿಗೆ ಕೂಲಂಕುಶವಾಗಿ ಚರ್ಚಿಸಿದ್ದು ಸದರಿ ವಿಷಯಗಳ ಬಗ್ಗೆ ಕ್ರಮ ಕೈಗೊಳ್ಳಲು ಸರ್ವಾನುಮತದಿಂದ ತೀರ್ಮಾನಿಸಿ ವಂದನೆಗಳೊಂದಿಗೆ ಈ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಕಾರ್ಯದರ್ಶಿಗಳು
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ ನಂ: 46 ಜೆ.ಸಿ ನಗರ

18/7/22
ಅಧ್ಯಕ್ಷರು
ಹಾಗೂ ನೋಡಲ್ ಅಧಿಕಾರಿಗಳು
ವಾರ್ಡ್ ನಂ: 46 ಜೆ.ಸಿ ನಗರ

ಪ್ರತಿಯನ್ನು:

1. ಕೌನ್ಸಿಲ್ ಕಾರ್ಯದರ್ಶಿ, ಬಿಬಿಎಂಪಿ ಕೇಂದ್ರ ಕಛೇರಿ, ರವರ ಅವಗಾಹನೆಗಾಗಿ ಸಲ್ಲಿಸಿದೆ.
2. ಮಾನ್ಯ ಜಂಟಿ/ಅಪರ ಆಯುಕ್ತರು (ಪೂರ್ವ) ಬಿಬಿಎಂಪಿ ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ
3. ಮಾನ್ಯ ಜಂಟಿ ಆಯುಕ್ತರು (ಆರೋಗ್ಯ/ಎಸ್‌ಡಬ್ಲ್ಯೂಎಂ) ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ
4. ಉಪ ಆಯುಕ್ತರು (ಪೂರ್ವ), ಬಿಬಿಎಂಪಿ ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ